# ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.

## ಸಿ.ಸಿ.ನಂ. 509/2018

| | | |
|---|---|---|
| ಸಾಕ್ಷಿದಾರರ ಹೆಸರು | : | ಕೆ. ಲೋಕೇಶ |
| ತಂದೆಯ ಹೆಸರು | : | ಕೆ.ಪಿ. ಕೆಂಡಗಣ್ಣಪ್ಪ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ವ್ಯವಸಾಯ ಮತ್ತು ರಾಜಕೀಯ ಪ್ರತಿನಿಧಿ |
| ವಾಸಸ್ಥಳ | : | ಕಟ್ಟೆಮನುಗನಹಳ್ಳಿ ಗ್ರಾಮ, ಹೆಚ್.ಡಿ. ಕೋಟೆ ತಾ. |

**<u>ಸಾಕ್ಷಿಯನ್ನು ದಿನಾಂಕಃ 13.02.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ</u>**

ಆರೋಪಿಗಳು ನನಗೆ ಪರಿಚಯ ಮತ್ತು ಇವರು ಬಿ.ಜೆ.ಪಿ. ಪಕ್ಷದ ಕಾರ್ಯಕರ್ತರಾಗಿರುತ್ತಾರೆ. ಈಗ ನನಗೆ ತೋರಿಸುತ್ತಿರುವ ದಿನಾಂಕಃ 06.09.2017 ರ ಮಹಜರ್ ನಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ನಾನು ನನ್ನ ವೈಯಕ್ತಿಕ ಕೆಲಸದ ನಿಮಿತ್ತ ಹೆಚ್.ಡಿ. ಕೋಟೆ ಪೋಲೀಸ್ ಠಾಣೆಗೆ ಹೋದಾಗ ಸಹಿ ಮಾಡಿರುತ್ತೇನೆ. ಸಾಕ್ಷಿಯು ದಿನಾಂಕಃ 06.09.2017 ರ ಸ್ಥಳ ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸದರಿ ದಾಖಲೆಯನ್ನು ನಿ.ಪಿ.-1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.-1(ಎ) ಎಂದು ಗುರುತಿಸಲಾಯಿತು. ನಿ.ಪಿ.-1 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**CC** 509/2018

<u>ಸಿ.ಡಬ್ಲೂ.-02 / ಪಿ.ಡಬ್ಲೂ-01</u>

**<u>ಪಾಟೀ ಸವಾಲುಃ ಸ.ಸ.ಅ ರವರಿಂದಃ</u>**

ಜಿಲ್ಲಾಧಿಕಾರಿಗಳ ಆದೇಶವನ್ನು ಉಲ್ಲಂಘಿಸಿ ಆರೋಪಿಗಳು ಮಂಗಳೂರು ಚಲೋ ಶೀರ್ಷಿಕೆಯಡಿ ಬೈಕ್ ರಾಲಿ ಹಮ್ಮಿಕೊಂಡು ರಾಲಿಗೆ ಹೋಗಲು ಪ್ರಯತ್ನಿಸಿದ್ದು, ಈ ವಿಚಾರವಾಗಿ ಹೆಚ್.ಡಿ. ಕೋಟೆ ಪೋಲೀಸರು ದಿನಾಂಕಃ 06.09.2017 ರಂದು ಹುಣಸೂರು-ಬೇಗೂರು ರಸ್ತೆಯಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿ.ಪಿ.-1 ರಂತೆ ಮಹಜರ್ ಮಾಡಿ 12 ಬೈಕ್ ಗಳನುನ ವಶಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಂತರ ನಾನು ಮಹಜರ್ ವಿಷಯಗಳನ್ನು ತಿಳಿದುಕೊಂಡೇ ಸ್ಥಳದಲ್ಲಿ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ನನ್ನ ಸಮಕ್ಷಮ ಮಹಜರ್ ಮಾಡಿ ಬೈಕ್ ಗಳನ್ನು ವಶಪಡಿಸಿಕೊಂಡಿದ್ದರು ಕೂಡ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಿಂದಃ ಏನೂ ಇರುವುದಿಲ್ಲ.</u>**

**<u>ಮರುವಿಚಾರಣೆ:</u>** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**